೪. ಶಾಸನ ರಚನೆ

(ಅ) ವಿಧೇಯಕ ಮಂಡನೆ

ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕ, ೨೦೦೧ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ೩) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''೨೦೦೧ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ''

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

ಪರ್ಯಾಲೋಚನಾ ಪ್ರಸ್ತಾವ

(ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕ, ೨೦೦೧

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು) ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು